# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ : 312
2. ಸದಸ್ಯರ ಹೆಸರು : ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 21.12.2022
4. ಉತ್ತರಿಸುವ ಸಚಿವರು : ಮಾನ್ಯ ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ರಾಜ್ಯದಲ್ಲಿ ಯಾವ ಯಾವ ಸ್ಥಳಗಳಲ್ಲಿ ವಿಮಾನ ನಿಲ್ದಾಣಗಳನ್ನು ಸ್ಥಾಪನೆ ಮಾಡಲಾಗುತ್ತಿದೆ;</td><td>ರಾಜ್ಯದಲ್ಲಿ ಶಿವಮೊಗ್ಗ, ವಿಜಯಪುರ, ಹಾಸನ, ರಾಯಚೂರು, ಕಾರವಾರ, ಕೊಪ್ಪಳ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ವಿಮಾನ ನಿಲ್ದಾಣಗಳನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ.</td></tr>
<tr><td>(ಆ)</td><td>ಈ ವಿಮಾನ ನಿಲ್ದಾಣವನ್ನು ನಿರ್ಮಿಸಲು ಈಗಾಗಲೇ ಎಷ್ಟು ಹಣವನ್ನು ವಿನಿಯೋಗಿಸಲಾಗಿದೆ;</td><td><table>
<tr><th>ಕ್ರ.ಸಂ</th><th>ವಿಮಾನ ನಿಲ್ದಾಣ</th><th>ಬಿಡುಗಡೆ ಮಾಡಿರುವ ಅನುದಾನ (ರೂ ಕೋಟಿಗಳಲ್ಲಿ)</th></tr>
<tr><td>01</td><td>ಶಿವಮೊಗ್ಗ</td><td>402.61</td></tr>
<tr><td>02</td><td>ವಿಜಯಪುರ</td><td>129.10</td></tr>
<tr><td>03</td><td>ಹಾಸನ</td><td>84.99</td></tr>
</table></td></tr>
<tr><td>(ಇ)</td><td>ಈ ಯೋಜನೆಗಳಿಗೆ ಕೇಂದ್ರ ಸರ್ಕಾರದಿಂದ ಬಂದಿರುವ ಅನುದಾನವೆಷ್ಟು ಹಾಗೂ ರಾಜ್ಯ ಸರ್ಕಾರ ತೊಡಗಿಸಿರುವ ಅನುದಾನವೆಷ್ಟು; (ವಿವರವಾದ ಮಾಹಿತಿ ನೀಡುವುದು)</td><td>ರಾಜ್ಯದಲ್ಲಿನ ವಿಮಾನ ನಿಲ್ದಾಣಗಳ ಅಭಿವೃದ್ಧಿಗೆ ಸಂಪೂರ್ಣ ಅನುದಾನವನ್ನು ರಾಜ್ಯ ಸರ್ಕಾರವೇ ಭರಿಸಲಾಗುತ್ತಿದೆ.</td></tr>
<tr><td>(ಈ)</td><td>ಈಗಾಗಲೇ ಅಂತಿಮ ಹಂತಕ್ಕೆ ಬಂದಿರುವ ವಿಮಾನ ನಿಲ್ದಾಣಗಳು ಯಾವುವು; ಅವುಗಳ ಕಾರ್ಯಾರಂಭ ಎಂದಿನಿಂದ ಚಾಲನೆಗೆ ಬರುವ ನಿರೀಕ್ಷೆ ಇದೆ; (ವಿವರ ನೀಡುವುದು)</td><td>ಶಿವಮೊಗ್ಗ ವಿಮಾನ ನಿಲ್ದಾಣದ ಕಾಮಗಾರಿಗಳು ಅಂತಿಮ ಹಂತದಲ್ಲಿದ್ದು, ವಿಮಾನ ನಿಲ್ದಾಣವು ಫೆಬ್ರವರಿ - 2023 ರಿಂದ ಕಾರ್ಯಾಚರಣೆಯನ್ನು ಪ್ರಾರಂಭಿಸುವ ನಿರೀಕ್ಷೆಯಿದೆ</td></tr>
<tr><td>(ಉ)</td><td>ಉಳಿದ ಸ್ಥಳಗಳ ವಿಮಾನ ನಿಲ್ದಾಣಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು; (ವಿವರ ನೀಡುವುದು)</td><td>ವಿಜಯಪುರ ಮತ್ತು ಹಾಸನ ವಿಮಾನ ನಿಲ್ದಾಣಗಳ ಕಾಮಗಾರಿಗಳು ಪ್ರಗತಿಯಲ್ಲಿದ್ದು, ವಿಜಯಪುರ ವಿಮಾನ ನಿಲ್ದಾಣವು ಆಗಸ್ಟ್ - 2023 ರಿಂದ ಹಾಗೂ ಹಾಸನ ವಿಮಾನ ನಿಲ್ದಾಣವು ಫೆಬ್ರವರಿ 2024 ರಿಂದ ಕಾರ್ಯಾಚರಣೆಯನ್ನು ಪ್ರಾರಂಭಿಸುವ ನಿರೀಕ್ಷೆಯಿದೆ.</td></tr>
<tr><td>(ಊ)</td><td>ಹಾಗೆಯೇ ಮೈಸೂರು ವಿಮಾನ ನಿಲ್ದಾಣವನ್ನು ಅಂತರಾಷ್ಟ್ರೀಯ ವಿಮಾನ ನಿಲ್ದಾಣವನ್ನಾಗಿ ಮೇಲ್ದರ್ಜೆಗೇರಿಸಿ ನಿರ್ಮಿಸಲು ಇನ್ನು ಎಷ್ಟು ಸಮಯ ಬೇಕಾಗುಬಹುದು; ಸರ್ಕಾರ ಎಂದಿನಿಂದ ಚಾಲನೆಗೆ ಕೊಡುವ ನಿರೀಕ್ಷಣೆಯಲ್ಲಿದೆ? (ಮಾಹಿತಿ ಒದಗಿಸುವುದು)</td><td>ಮೈಸೂರು ವಿಮಾನ ನಿಲ್ದಾಣವನ್ನು ಅಂತರಾಷ್ಟ್ರೀಯ ವಿಮಾನ ನಿಲ್ದಾಣವನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಇರುವುದಿಲ್ಲ.<br>ಅದರ, ಈ ವಿಮಾನ ನಿಲ್ದಾಣವನ್ನು ಏರ್‌ಬಸ್ - 320 ಮಾದರಿಯ ವಿಮಾನಗಳ ಹಾರಾಟಕ್ಕೆ ಅನುವಾಗುವಂತೆ ಉನ್ನತೀಕರಿಸುವ ಉದ್ದೇಶದಿಂದ 240 ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ರೂ.150.00 ಕೋಟಿ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ. ಭೂಸ್ವಾಧೀನ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.</td></tr>
</table>

ಸಂಖ್ಯೆ:ಮೂಲಅಇ 194 ರಾಅವಿ 2022

**(ವಿ. ಸೋಮಣ್ಣ)**
ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ,
ಸಚಿವರು